# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 680 (806)

ಸದಸ್ಯರ ಹೆಸರು : ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ)

ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಗಳು

ಉತ್ತರಿಸಬೇಕಾದ ದಿನಾಂಕ : 13.07.2023

| | | |
|---|---|---|
| ಅ | ರಾಜ್ಯ ಸರ್ಕಾರಿ ನೌಕರರಿಗೆ ಜಾರಿಗೆ ತಂದಿರುವ ಎನ್.ಪಿ.ಎಸ್. ನಿಂದ ಓ.ಪಿ.ಎಸ್.ಗೆ ಪರಿವರ್ತನೆ ಕುರಿತು ಸರ್ಕಾರದ ನಿಲುವೇನು; | ಸರ್ಕಾರದ ಆದೇಶ ಸಂಖ್ಯೆ: ಆಇ 04 ಪಿಇಟಿ 2005, ದಿನಾಂಕ: 31.03.2006ರಲ್ಲಿ ದಿನಾಂಕ: 01.04.2006ರಂದು ಮತ್ತು ತದನಂತರ ಸರ್ಕಾರಿ ಸೇವೆಗೆ ಸೇರುವ ಎಲ್ಲಾ ನೌಕರರಿಗೆ ಕಡ್ಡಾಯವಾಗಿ ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ಜಾರಿಗೊಳಿಸಿ ಆದೇಶಿಸಿದೆ.<br><br>ರಾಷ್ಟ್ರೀಯ ಪಿಂಚಣಿ ಯೋಜನೆಗೆ ಸೂಕ್ತ ಬದಲಾವಣೆ/ಮಾರ್ಪಾಡು ಮಾಡಲು ಸರ್ಕಾರದ ಆದೇಶ ಸಂಖ್ಯೆ: ಆಇ 107 ಪಿ.ಇ.ಎನ್. 2018, ದಿನಾಂಕ: 11.12.2018 ರಲ್ಲಿ ಅಧಿಕಾರಿಗಳ ಸಮಿತಿಯನ್ನು ರಚಿಸಲಾಗಿದೆ. ಸಮಿತಿಯ ವರದಿಯನ್ನು ನಿರೀಕ್ಷಿಸಲಾಗಿದೆ.<br><br>ಸರ್ಕಾರದ ಆದೇಶ ಸಂಖ್ಯೆ: ಆಇ-ಪಿಇಎನ್/89/2023, ದಿನಾಂಕ: 01.03.2023ರಲ್ಲಿ ರಾಜ್ಯದಲ್ಲಿ ಜಾರಿ ಇರುವ ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ರದ್ದು ಪಡಿಸುವ ಸಂಬಂಧ ಈಗಾಗಲೇ ಹಳೆ ಪಿಂಚಣಿ ಯೋಜನೆಯನ್ನು ಮರು ಜಾರಿ ಮಾಡಿರುವ ರಾಜ್ಯಗಳಲ್ಲಿ ಈ ಯೋಜನೆಯನ್ನು ಅನುಷ್ಠಾನಗೊಳಿಸಿರುವ ಕುರಿತು ಕೈಗೊಂಡಿರುವ ಕ್ರಮಗಳ ಬಗ್ಗೆ ಅಧ್ಯಯನ ನಡೆಸಿ ವರದಿ ಸಲ್ಲಿಸಲು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಿ ಆದೇಶಿಸಿದೆ. |
| ಆ | ಈಗಾಗಲೇ ಬೇರೆ ಬೇರೆ ರಾಜ್ಯಗಳಲ್ಲಿ ಹಳೆಯ ಪಿಂಚಣಿ (ಓ.ಪಿ.ಎಸ್) ಯೋಜನೆಯನ್ನು ಜಾರಿಗೆ ತಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | |
| ಇ | ಓ.ಪಿ.ಎಸ್.ಗೆ ಸಂಬಂಧಿಸಿದಂತೆ 2018ರಲ್ಲಿ ರಚಿಸಿದ ಸಮಿತಿಯ ವರದಿ ನೀಡಿದೆಯೇ; ನೀಡದಿದ್ದಲ್ಲಿ ವಿಳಂಬಕ್ಕೆ ಕಾರಣಗಳೇನು; | |
| ಈ | ಹಳೆ ಪಿಂಚಣಿ ಯೋಜನೆಯನ್ನು ಜಾರಿಗೆ ತರುವ ಬಗ್ಗೆ ರಾಜ್ಯ ಸರ್ಕಾರಿ ನೌಕರರ ಹಿತರಕ್ಷಣೆಗಾಗಿ ಸರ್ಕಾರವು ಸಕಾರಾತ್ಮಕ ನಿರ್ಧಾರ ಕೈಗೊಳ್ಳುವುದೇ; | |
| ಉ | ಆರ್ಥಿಕ ಪ್ರಗತಿ ಹಾಗೂ ಅಭಿವೃದ್ಧಿ ದೃಷ್ಟಿಯಲ್ಲಿ ದೇಶದ ಬಹುತೇಕ ರಾಜ್ಯಗಳಿಂದ ಪ್ರಗತಿಯುಳ್ಳ ಕರ್ನಾಟಕ ರಾಜ್ಯ ತನ್ನ ಸರ್ಕಾರಿ ನೌಕರರಿಗೆ ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ಜಾರಿಗೊಳಿಸಲು ಕ್ರಮವಹಿಸುವುದೇ? | |

ಆಇ- ಪಿಇಎನ್/ 233 /2023

(ಸಿದ್ದರಾಮಯ್ಯ)
ಮುಖ್ಯಮಂತ್ರಿ